## ಎನ್ಐಟಿಕೆಯ ವಿದ್ಯಾರ್ಥಿ ಹಾಸ್ಟೆಲ್ ಉದ್ಘಾಟಿಸಿದ ಪ್ರಧಾನಿ

# ದೇಶದ ಅಭಿವೃದ್ಧಿಯೇ ಮೋದಿ ಕನಸು



ಎನ್ಐಟಿಕೆಯಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಸಂಸದ ನಳಿನ್ ಕುಮಾರ್

**ಮಂಗಳೂರು:** ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರಕ್ಕೆ ಕೇಂದ್ರ ಸರಕಾರದಿಂದ ಕಳೆದ 10 ವರ್ಷಗಳಲ್ಲಿ 79 ಸಾವಿರ ಕೋಟಿ ರೂ. ಅನುದಾನ ಲಭಿಸಿದೆ. ಈ ಪೈಕಿ ಸುರತ್ಕಲ್ ಎನ್ಐಟಿಕೆಗೆ 588 ಕೋಟಿ ರೂ. ಬಿಡುಗಡೆಗೊಂಡಿದೆ. ಮಂಗಳೂರು ವಿಶ್ವವಿದ್ಯಾಲಯದ ಸಂಶೋಧನಾ ವಿಭಾಗಕ್ಕೆ 20 ಕೋಟಿ ರೂ. ಬಿಡುಗಡೆಗೊಳಿಸಲಾಗಿದೆ ಎಂದು ಸಂಸದ ನಳಿನ್‌ಕುಮಾರ್ ಕಟೀಲು ತಿಳಿಸಿದರು.

ಸುರತ್ಕಲ್ ಎನ್ಐಟಿಕೆಯಲ್ಲಿ ಒಟ್ಟು 132 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿದ ಮೂರು ವಿದ್ಯಾರ್ಥಿ ಹಾಸ್ಟೆಲ್‌ನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಮಂಗಳವಾರ ಐಐಎಂ ಜಮ್ಮುವಿನಿಂದ ವರ್ಚುವಲ್ ಮೂಲಕ ಲೋಕಾರ್ಪಣೆಗೊಳಿಸಿದರು. ಈ ವೇಳೆ ಎನ್ಐಟಿಕೆಯಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಸಂಸದ ನಳಿನ್ ಮಾತನಾಡಿದರು.

ಸ್ವಾತಂತ್ರ್ಯದ ಅಮೃತ ಕಾಲದಲ್ಲಿ ಎಲ್ಲ ರಂಗಗಳಲ್ಲೂ ಭಾರತ ಅಭಿವೃದ್ಧಿ ಕಾಣಬೇಕು ಎಂಬುದು ಪ್ರಧಾನಿ ಮೋದಿ ಅವರ ಕನಸು. ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸುವ ಮೂಲಕ ಶೈಕ್ಷಣಿಕವಾಗಿ ಪರಿವರ್ತನೆ ತರಲಾಗುತ್ತಿದೆ ಎಂದರು.

1960ರಲ್ಲಿ ಶ್ರೀನಿವಾಸ ಮಲ್ಯರು ಸ್ಥಾಪಿಸಿದ ಕೆಆರ್ಇಸಿ 2002ರಲ್ಲಿ ಎನ್ಐಟಿಕೆ ಆಗಿ ಪರಿವರ್ತನೆಗೊಂಡಿದೆ. ದೇಶ, ವಿದೇಶಗಳ ಸಾಧಕರು ಎನ್ಐಟಿಕೆ ವಿದ್ಯಾರ್ಥಿಗಳಾಗಿದ್ದರು ಎಂಬುದು ಹೆಮ್ಮೆಯ ಸಂಗತಿ. ದೇಶದ 12 ಪ್ರತಿಷ್ಠಿತ ಎಂಜಿನಿಯರಿಂಗ್ ಕಾಲೇಜುಗಳ ಪೈಕಿ ಎನ್ಐಟಿಕೆ ಕೂಡ ಒಂದು. ಈ ಹಾಸ್ಟೆಲ್‌ನಿಂದ 1,527 ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ನಳಿನ್ ಕುಮಾರ್ ಹೇಳಿದರು.

### ಮೋದಿ ವಿವರಣೆ

ವಿವಿಧ ಯೋಜನೆಗಳ ಲೋಕಾರ್ಪಣೆ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಶಿಕ್ಷಣ ಮತ್ತು ಕೌಶಲ್ಯ ಕ್ಷೇತ್ರದಲ್ಲಿ ಭಾರತ ದಾಪುಗಾಲು ಇಡುತ್ತಿದೆ. ದೇಶದಲ್ಲಿ ದಾಖಲೆ ಸಂಖ್ಯೆಯಲ್ಲಿ ಶಾಲಾ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳನ್ನು ನಿರ್ಮಿಸಲಾಗಿದೆ ಎಂದು ಉನ್ನತ ಶಿಕ್ಷಣ ಕ್ಷೇತ್ರದ ಸಾಧನೆಗಳ ಕುರಿತು ವಿವರಿಸಿದರು.

ಎನ್ಐಟಿಕೆ ನಿರ್ದೇಶಕ ಪ್ರೊ. ಬಿ.ರವಿ ಮಾತನಾಡಿ, ಎನ್ಐಟಿಕೆಯಲ್ಲಿ ಸಮಾಜಮುಖಿ ಶಿಕ್ಷಣ ಸಿಗುತ್ತಿದ್ದು, ಇದು ದೇಶದ ಭದ್ರ ಬುನಾದಿಗೆ ಅತ್ಯಗತ್ಯವಾಗಿದೆ. ದೇಶದದಲ್ಲಿ ಸುಸ್ಥಿರ ಕ್ಯಾಂಪಸ್ ಪೈಕಿ ಐಐಟಿಗಳಿಗಿಂತ ಮುಂಚೂಣಿಯಲ್ಲಿ ಎರಡನೇ ಸ್ಥಾನದಲ್ಲಿ ಸುರತ್ಕಲ್ ಎನ್ಐಟಿಕೆ ಇದೆ ಎಂದು ಹೆಗ್ಗಳಿಕೆಯ ಸಂಗತಿ. ಸಂಶೋಧನೆ, ಆರೋಗ್ಯ ಸ್ನೇಹಿ ಪರಿಸರಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಡೀನ್ ಚಿತ್ತರಂಜನ್ ಹೆಗ್ಡೆ ಪ್ರಾಸ್ತಾವಿಕ ಮಾತನಾಡಿದರು. ಪ್ರೊ. ಪುಷ್ಪರಾಜ್ ಶೆಟ್ಟಿ ವಂದಿಸಿದರು. ಪಾಲಿಕೆ ಸದಸ್ಯರಾದ ಶೋಭಾ ರಾಜೇಶ್, ಶ್ವೇತಾ ಎ., ವಿಧಾನ ಪರಿಷತ್ ಮಾಜಿ ಸದಸ್ಯ ಕ್ಯಾ.ಗಣೇಶ್ ಕಾರ್ಣಿಕ್ ಉಪಸ್ಥಿತರಿದ್ದರು.

Hosa Digantha, Date:24/02/24, p.no - 14